ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಸಾಮಾನ್ಯ ಆಡಳಿತ ಮಂಡಳಿಗಳ ಪದವಿ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-

937 (1180) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಸಾಮಾನ್ಯ ಆಡಳಿತ ಮಂಡಳಿಗಳು ನಡೆಸುತ್ತಿರುವ ಖಾಸಗಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ; ಈ ಕಾಲೇಜುಗಳನ್ನು ಪ್ರಾರಂಭಿಸಿದ ವರ್ಷ ಯಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಖಾಸಗಿ ಆಡಳಿತ ಮಂಡಳಿಗಳು ನಡೆಸುತ್ತಿರುವ ಪದವಿ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಇರುವ ನಿಯಮಾವಳಿಗಳೇನು ; ಯಾವ ವರ್ಷದವರೆಗೆ ಅನುದಾನಕ್ಕೆ ಒಳಪಡಿಸಲಾಗಿದೆ ; (ವಿವರ ನೀಡುವುದು)

(ಇ) 1987 ರಿಂದ 1995ರ ಮಧ್ಯದಲ್ಲಿ ಸಾಮಾನ್ಯ ಆಡಳಿತ ಮಂಡಳಿಗಳು ಆರಂಭಿಸಿದ ಪದವಿ ಕಾಲೇಜುಗಳನ್ನು ಅನುದಾನಕ್ಕೆಒಳಪಡಿಸುವ ಕುರಿತು ಸರ್ಕಾರದ ಕ್ರಮ ಹಾಗೂ ನಿಲುವೇನು ; ಇದಕ್ಕಾಗಿ ಸರ್ಕಾರಕ್ಕೆ ತಗಲುಬಹುದಾದ ವೆಚ್ಚ ಎಷ್ಟು ; ಈ ಬಾರಿಯ ಬಜೆಟ್‌ನಲ್ಲಿ ಅನುದಾನವನ್ನು ಒದಗಿಸಲು ಸರ್ಕಾರ ಮುಂದಾಗುವುದೇ?